ಸುದ್ದಿ ಸಿಂಚನ

ತರಬೇತಿಗೆ ಅರ್ಜಿ ಆಹ್ವಾನ: ಅವಧಿ ವಿಸ್ತರಣೆ

ಶಿವಮೊಗ್ಗ: ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಬೆಳಗಾವಿ ಜಿಲ್ಲೆಯ ಇಲಾಖಾ ಸೇವಾ ಆಯ್ಕೆ ಪೂರ್ವ ತರಬೇತಿ ಶಾಲೆಗಳಲ್ಲಿ ಆಯೋಜಿಸಿದ್ದ ಭಾರತೀಯ ಸೇನೆ/ ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ 2026-27ನೇ ಸಾಲಿನಲ್ಲಿ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ಉಚಿತ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಗೆ ಅರ್ಜಿ ಆಹ್ವಾನಿಸಿದ್ದು, ಅರ್ಜಿ ಸಲ್ಲಿಸುವ ದಿನಾಂಕವನ್ನು ಮೇ 13 ರವರೆಗೆ ವಿಸ್ತರಿಸಲಾಗಿದೆ ಎಂದು ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಹೆಚ್ಚಿನ ಮಾಹಿತಿಗೆ 0820-2574881/08182-222129 ಸಂಪರ್ಕಿಸುವುದು.

ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ: ಶಿವಮೊಗ್ಗ ಸರ್ಕಾರಿ ಮಹಿಳಾ ಮತ್ತು ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿನಿಯರಿಗೆ ಡಿಪ್ಲೊಮಾ ಪ್ರಥಮ ಸೆಮಿಸ್ಟರ್‌ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಪ್ರವೇಶ ಪಡೆಯಲು ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ವರ್ಗಾವಣೆ ಪ್ರಮಾಣ ಪತ್ರ/ಎನ್‌ಓಸಿ, 05 ವರ್ಷದ ವ್ಯಾಸಂಗ ಪ್ರಮಾಣ ಪತ್ರ (ಕ್ಷೇತ್ರ ಶಿಕ್ಷಣಾಧಿಕಾರಿಗಳು ದೃಢೀಕರಿಸಿದ ಸಹಿಯೊಂದಿಗೆ), ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್‌ಕಾರ್ಡ್ ಹಾಗೂ 06 ಭಾವಚಿತ್ರಗಳೊಂದಿಗೆ ಮೇ 2 ರೊಳಗಾಗಿ ಸಲ್ಲಿಸುವುದು. ಪ್ರವೇಶ ಪ್ರಕ್ರಿಯೆಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗೆ ಸುನೀಲ್ 9480542763 ಸಂಪರ್ಕಿಸಬಹುದು.

ಕುವೆಂಪು ವಿವಿ ಕುಲಪತಿ ವಿರುದ್ಧ ತೀವ್ರ ಆಕ್ರೋಶ

ಎನ್‌ಎಸ್‌ಯುಐ ನೇತೃತ್ವದಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ | ವಿಸಿ ಕಚೇರಿ ಕುರ್ಚಿ, ಹೂಕುಂಡ ಪುಡಿ ಪುಡಿ | ನಾಮಫಲಕಕ್ಕೆ ಮಸಿ

• **ಕನ್ನಡಪ್ರಭ ವಾರ್ತೆ** ಶಿವಮೊಗ್ಗ

ವಿದ್ಯಾರ್ಥಿಗಳ ಸಮಸ್ಯೆಗೆ ಸ್ಪಂದಿಸದ ಕುವೆಂಪು ವಿಶ್ವವಿದ್ಯಾಲಯದ ಕುಲಪತಿಗಳ ವಿರುದ್ಧ ಎನ್‌ಎಸ್‌ಯುಐ ನೇತೃತ್ವದಲ್ಲಿ ನಡೆದ ವಿದ್ಯಾರ್ಥಿಗಳ ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಂಡಿತು. ಕುಲಪತಿಗಳ ಕಚೇರಿ ಆವರಣದಲ್ಲಿದ್ದ ಕುರ್ಚಿ, ಹೂಕುಂಡ, ನಾಮಫಲಕ ಎಲ್ಲವನ್ನು ಪ್ರತಿಭಟನಾನಿರತ ವಿದ್ಯಾರ್ಥಿಗಳು ಪುಡಿ ಪುಡಿ ಮಾಡಿದ್ದಾರೆ.

ಕುವೆಂಪು ವಿಶ್ವವಿದ್ಯಾಲಯದಲ್ಲಿ ನಿರಂತರವಾಗಿ ನಡೆಯುತ್ತಿರುವ ವಿದ್ಯಾರ್ಥಿ ವಿರೋಧಿ ಧೋರಣೆ ಹಾಗೂ ಆಡಳಿತಾತ್ಮಕ ವೈಫಲ್ಯಗಳನ್ನು ಪ್ರತಿಭಟನಾನಿರತ ವಿದ್ಯಾರ್ಥಿಗಳು ಖಂಡಿಸಿದರು. ವಿದ್ಯಾರ್ಥಿಗಳ ಸಮಸ್ಯೆ ಬಗೆಹರಿಸದ ವಿಸಿಗೆ ಧಿಕ್ಕಾರ ಕೂಗಿ, ಕಚೇರಿಯ ಬೋರ್ಡ್‌ಗೆ ಕಪ್ಪು ಮಸಿ ಬಳಿದರು. ಕುಲಪತಿಗಳ ಕಚೇರಿಯನ್ನು ವಿದ್ಯಾರ್ಥಿಗಳು ಅಕ್ಷರಶಃ ಧ್ವಂಸಗೊಳಿಸಿದರು.

ಕಳೆದ ಐದು ತಿಂಗಳ ಹಿಂದೆ ನಡೆದ 1-3 ಮತ್ತು 5ನೇ ಸೆಮಿಸ್ಟರ್ ಪರೀಕ್ಷೆಗಳ ಫಲಿತಾಂಶ ಪ್ರಕಟಿಸಿಲ್ಲ, ಕಳೆದ ಮೂರು ವರ್ಷಗಳಿಂದ ಪದವಿ ಅಂಕಪಟ್ಟಿಗಳನ್ನು ವಿತರಿಸದಿರುವುದು ವಿದ್ಯಾರ್ಥಿಗಳ ಆತಂಕಕ್ಕೆ ಕಾರಣವಾಗಿದೆ.

ವಿಶ್ವವಿದ್ಯಾಲಯವು ಏಕಾಏಕಿ ಪರೀಕ್ಷಾ ಶುಲ್ಕ ಹಾಗೂ ಪ್ರವೇಶ ಶುಲ್ಕವನ್ನು ಸಾವಿರಾರು ರೂಪಾಯಿ ಗಳಷ್ಟು ಹೆಚ್ಚಿಸಿರುವುದು ಬಡ ಹಾಗೂ ಮಧ್ಯಮ ವರ್ಗದ ವಿದ್ಯಾರ್ಥಿಗಳ ಪಾಲಿಗೆ ಮರಣ ಶಾಸನವಾಗಿದೆ. ಡಿಜಿಟಲ್ ಮೌಲ್ಯಮಾಪನದಲ್ಲಿನ ತಾಂತ್ರಿಕ ಲೋಪಗಳಿಂದಾಗಿ ಫಲಿತಾಂಶಗಳಲ್ಲಿ ಗೊಂದಲ ಏರ್ಪಟ್ಟಿದ್ದು, ಪಾಸ್ ಆದವರು ಫೇಲ್ ಎಂದು ತೋರಿಸುತ್ತಿರುವುದು ವಿದ್ಯಾರ್ಥಿಗಳ ಆಕ್ರೋಶಕ್ಕೆ ಕಾರಣವಾಗಿದೆ.

ಸ್ಥಳಕ್ಕೆ ಭೇಟಿ ನೀಡಿದ ಸಿಇಒ-ಎಎಸ್ಪಿ: ಕುವೆಂಪು ವಿವಿಯಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ ತೀವ್ರಗೊಂಡ ಹಿನ್ನಲೆಯಲ್ಲಿ ಘಟನಾ ಸ್ಥಳಕ್ಕೆ ಕುವೆಂಪು ವಿವಿಯ ಕುಲಸಚಿವರು ಆಗಿರುವ ಶಿವಮೊಗ್ಗ ಜಿ.ಪಂ ಸಿಇಒ ಹಾಗೂ ಪ್ರಭಾರ ಜಿಲ್ಲಾಧಿಕಾರಿ ಎನ್.ಹೇಮಂತ್ ಹಾಗೂ ಹೆಚ್ಚುವರಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾರ್ಯಪ್ಪ ಭೇಟಿ ನೀಡಿದರು.

ಪೀಠೋಪಕರಣ ಧ್ವಂಸಗೊಂಡಿದ್ದನ್ನು ವೀಕ್ಷಿಸಿದ ಎನ್. ಹೇಮಂತ್ ಅವರು, ವಿವಿಯ ಸಿಂಡಿಕೇಟ್ ಸಭಾಂಗಣದಲ್ಲಿ ಚರ್ಚೆ ನಡೆಸಿದರು. ಘಟನೆ ಸಂಬಂಧ ಕುಲಪತಿ, ರಿಜಿಸ್ಟ್ರಾರ್ ಅವರಿಂದ ಮಾಹಿತಿ ಪಡೆದುಕೊಂಡರು.

ಪ್ರತಿಭಟನಾಕಾರರ ಜತೆ ಮಾತನಾಡಿದ ಭದ್ರಾವತಿ ಡಿವೈಎಸ್ಪಿ ಪ್ರಕಾಶ್ ರಾಥೋಡ್, ಪ್ರತಿಭಟನಾನಿರತ ವಿದ್ಯಾರ್ಥಿಗಳ ಮನವೊಲಿಸುವಲ್ಲಿ ಯಶಸ್ವಿಯಾದರು. ಬಳಿಕ ವಿದ್ಯಾರ್ಥಿಗಳು ಪ್ರತಿಭಟನೆ ಹಿಂಪಡೆದರು. ಎನ್‌ಎಸ್‌ಯುಐನ ಜಿಲ್ಲಾಧ್ಯಕ್ಷರಾದ ವಿಜಯ್ ಕಾರ್ಯ ಧ್ಯಕ್ಷರಾದ ರವಿ ಕಟಿಕೆರೆ ನಗರಾಧ್ಯಕ್ಷರಾದ ರವಿ, ನಗರ ಉಪಾಧ್ಯಕ್ಷರಾದ ಆದಿತ್ಯ, ಸುಭಾನ್, ಪ್ರಧಾನ ಕಾರ್ಯ ದರ್ಶಿಗಳಾದ ಚಂದ್ರೋಜಿ ರಾವ್, ವರುಣ್ ಎ ಪಂಡಿತ್ ಮೊದಲಾದವರು ಇದ್ದರು.

ಶಂಕರಘಟ್ಟದ ಕುವೆಂಪು ವಿಶ್ವವಿದ್ಯಾಲಯದ ಆವರಣದಲ್ಲಿ ಬುಧವಾರ ಕುಲಪತಿಗಳ ವಿರುದ್ಧ ಎನ್‌ಎಸ್‌ಯುಐ ನೇತೃತ್ವದಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ ನಡೆಸಿದರು.

ಕುಲಪತಿಗಳ ವಿರುದ್ಧ ವಿದ್ಯಾರ್ಥಿಗಳ ಪ್ರತಿಭಟನೆ ವೇಳೆ ವಿಸಿ ಕಚೇರಿ ಬೋರ್ಡ್‌ಗೆ ಪ್ರತಿಭಟನಾಕಾರರು ಕಪ್ಪು ಮಸಿ ಬಳಿದರು.

ವಿದ್ಯಾರ್ಥಿಗಳ ಪ್ರಮುಖ ಬೇಡಿಕೆಗಳೇನು?

- ಕಳೆದ 5 ತಿಂಗಳ ಹಿಂದೆ ನಡೆದಿದ್ದ 1-3 ಮತ್ತು 5 ನೇ ಸೆಮಿಸ್ಟರ್‌ಪರೀಕ್ಷೆಗಳ ಫಲಿತಾಂಶ ಪ್ರಕಟಿಸಬೇಕು. ಪದವಿ ಪ್ರಮಾಣ ಪತ್ರ, ಅಂಕಪಟ್ಟಿ, ಜೆನ್ಯೂಯೆನ್ ಸರ್ಟಿಫಿಕೇಟ್ ವಿತರಣೆ ಮಾಡಬೇಕು.
- ಏಕಾ ಏಕಿ ಏರಿಸಿರುವ ಸಾವಿರಾರು ರುಪಾಯಿ ಪರೀಕ್ಷಾ ಶುಲ್ಕ ಹಾಗು ಪ್ರವೇಶ ಶುಲ್ಕವನ್ನು ಇಳಿಸಬೇಕು.
- ಡಿಜಿಟಲ್ ಮೌಲ್ಯಮಾಪನದಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದ್ದು ಕೂಡಲೇ ಡಿಜಿಟಲ್ ಮೌಲ್ಯಮಾಪನವನ್ನು ಕೈಬಿಡಬೇಕು.
- ಭ್ರಷ್ಟಾಚಾರದ ಆರೋಪ ಹಾಗು ವಿಶ್ವ ವಿದ್ಯಾಲಯದಲ್ಲಿ ಕಳಂಕ ಹೊತ್ತಿರುವ ಎಲ್ಲಾ ಅಧಿಕಾರಿಗಳನ್ನೂ ತಕ್ಷಣ ವಜಾ ಮಾಡಬೇಕು.
- ವಿವಿ ಯಲ್ಲಿನ ತಾಂತ್ರಿಕ ತೊಂದರೆಗಳಿಗೆ ಸರ್ಕಾರವನ್ನು ದೂರದೆ ಸರಿಪಡಿಸುವ ವ್ಯವಸ್ಥೆ ಮಾಡಬೇಕು.
- 2021-22ರ ದೂರತಿಕ್ಷಣ ವಿದ್ಯಾರ್ಥಿಗಳ ಪರೀಕ್ಷೆ ಮತ್ತು ಅಂಕಪಟ್ಟಿ, ಫಲಿತಾಂಶದ ಬಗ್ಗೆ ಕೂಡಲೆ ಗಮನಹರಿಸಬೇಕು

ಕಿಡಿಗೇಡಿಗಳ ಕೃತ್ಯ, ಪ್ರಕರಣ ದಾಖಲಿಸುತ್ತೇವೆ: ಕುಲಪತಿ

ಎನ್‌ಎಸ್‌ಯುಐ ನೇತೃತ್ವದಲ್ಲಿ ಕುವೆಂಪು ವಿವಿ ಆವರಣದಲ್ಲಿ ನಡೆದ ಪ್ರತಿಭಟನೆಯಲ್ಲಿ ಪೀಠೋಪಕರಣ ಧ್ವಂಸಗೊಳಿಸಿರುವುದು ಕಿಡಿಗೇಡಿಗಳ ಕೃತ್ಯ. ಇವರು ಯಾರು ವಿದ್ಯಾರ್ಥಿಗಳಲ್ಲ, ಅಂತಹವರ ವಿರುದ್ಧ ಪ್ರಕರಣ ದಾಖಲಿಸುತ್ತೇವೆ ಎಂದು ಕುವೆಂಪು ವಿವಿ ಕುಲಪತಿ ಪ್ರೊ. ಶರತ್ ಅನಂತಮೂರ್ತಿ ಹೇಳಿದರು. ಪ್ರತಿಭಟನೆ ವೇಳೆ ನಡೆದ ಘಟನೆ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ, ಎಂಬಿಎ ವಿಭಾಗದ ಮಾರಾಟ ಮಳಿಗೆ ಪ್ರಾರಂಭ ಮಾಡಿದ್ದೇವು.ಈ ಸಮಯದಲ್ಲಿ ಕಚೇರಿಯಿಂದ ಕಾಲ್ ಬಂತು. ಯಾರೋ ಕಿಡಿಗೇಡಿಗಳು ನುಗ್ಗಿ ಪಾಟ್ ಒಡೆದಿದ್ದಾರೆ ಎಂದು ಹೇಳಿದರು. ವಿವಿಯಿಂದ ಹಿಂದೆ ಹೊರಹೋದ ಅಧಿಕಾರಿಗಳೇ ಕೃತ್ಯದ ಹಿಂದಿದ್ದಾರೆ. ಕುವೆಂಪು ವಿವಿಯ ವಿರುದ್ಧ ಸುಳ್ಳು ಆಪಾದನೆ ಮಾಡುವ ಕೆಲಸ ಆಗಿದೆ. ಘಟನೆಗೆ ಕಾರಣರಾದವರ ವಿರುದ್ಧ ಪ್ರಕರಣ ದಾಖಲಿಸುತ್ತೇವೆಂದರು.

ರೈತರ ಜೀವನೋಪಾಯ ಕಸಿದ ಬಿರುಗಾಳಿ ಸಹಿತ ಆಲಿಕಲ್ಲು ಮಳೆ

ಬಿರುಗಾಳಿ ಸಹಿತ ಭಾರಿ ವರ್ಷಧಾರೆಗೆ ಸಾವಿರಾರು ಎಕರೆ ಅಡಕೆ, ತೆಂಗಿನ ತೋಟ ನಾಶ | ಹಾನಿ ಪ್ರದೇಶಗಳಿಗೆ ಅಧಿಕಾರಿಗಳ ಭೇಟಿ

• **ಕನ್ನಡಪ್ರಭ ವಾರ್ತೆ** ಹೊಳೆಹೊನ್ನೂರು

ಜಿಲ್ಲೆಯಲ್ಲಿ ಭಾನುವಾರ ಸಂಜೆ ಬಿರುಗಾಳಿ ಸಹಿತ ಸುರಿದ ಆಲಿಕಲ್ಲು ಮಳೆ ಸಾವಿರಾರು ಎಕರೆ ಪ್ರದೇಶದಲ್ಲಿ ಬೆಳೆದಿದ್ದ ಅಡಕೆ ಹಾಗೂ ತೆಂಗಿನ ತೋಟವನ್ನು ಬಲಿ ತೆಗೆದುಕೊಂಡಿದ್ದು, ರೈತರ ಪಾಲಿಗೆ ಕೈಗೆ ಬಂದು ತುತ್ತು ಬಾಯಿಗೆ ಬರದಂತಾಗಿದೆ.

ಹೊಳೆಹೊನ್ನೂರು ಹಾಗೂ ಆನವೇರಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ 36 ಹಳ್ಳಿಗಳಲ್ಲಿ ಭಾನುವಾರ ಸಂಜೆ ಬಿರುಗಾಳಿ ಸಹಿತ ಸುರಿದ ಆಲಿಕಲ್ಲು ಮಳೆ ಫಸಲಿಗೆ ಬಂದಿದ್ದ ಅಡಕೆ ಮರಗಳನ್ನು ಧರೆಗುರುಳಿಸಿದೆ. ಇದರೊಂದಿಗೆ ಅಡಕೆ ಬೆಳೆಯನ್ನೇ ಜೀವನಾಧಾರವಾಗಿ ನಂಬಿಕೊಂಡಿದ್ದ ಸಾವಿರಾರು ರೈತರ ಬದುಕು ಅತಂತ್ರವಾಗಿದೆ.

ಭದ್ರಾವತಿ ತಾಲೂಕಿನಲ್ಲಿ ಅಡಕೆ ಪ್ರಮುಖ ಬೆಳೆ. ಸಾಮಾನ್ಯವಾಗಿ ಈ ಬಾಗ ರೈತರು ಅಡಕೆ ಬೆಳೆಯನ್ನೇ ನಂಬಿಕೊಂಡಿದ್ದಾರೆ. ಆನವೇರಿ, ಗುಡಮಗಟ್ಟ, ಮಲ್ಲಿಗೇನಹಳ್ಳಿ, ಲಕ್ಷ್ಮೀಪುರ, ಆದ್ರಿಹಳ್ಳಿ, ಕಲ್ಲಹಳ್ಳಿ, ದಿಗ್ಗೇನಹಳ್ಳಿ, ಮಂಗೋಟಿ, ಮಲ್ಲಾಪುರ, ಹನುಮಂತಾಪುರ, ನಾಗಸಮುದ್ರ, ಸಿದ್ಲೀಪುರ, ಡಣಾಯಕಪುರ, ಕೋಡಮಗ್ಗಿ, ಕೈಮರ, ಅರಹತೊಳಲು, ವಡ್ಡರಹಟ್ಟಿ, ಕಲ್ಲಿಹಾಳ್, ಚಂದನಕೆರೆ, ಬೈರನಹಳ್ಳಿ, ಕೆರೆಬೀರನಹಳ್ಳಿ, ತಡಸ, ಅಗರದಹಳ್ಳಿ, ಎಮ್ಮೆಹಟ್ಟಿ, ಯಡೇಹಳ್ಳಿ ಸೇರಿದಂತೆ ಹಲವಾರು ಗ್ರಾಮಗಳಲ್ಲಿ ಮಳೆಯ ಅವಾಂತದಿಂದ ಬೆಳೆದಿದ್ದ ಅಡಕೆ ತೋಟಗಳ ಜತೆಗೆ ನೂರಾರು ಮನೆಗಳು ಹಾಳಾಗಿ ಹೋಗಿವೆ.

4500 ಎಕರೆಯಲ್ಲಿ ತೋಟ ನಾಶ: ಬಿರುಗಾಳಿ ಸಹಿತ ಸುರಿದ ಆಲಿಕಲ್ಲು ಮಳೆಗೆ ಎರಡು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬೆಳೆಯಲಾಗಿದ್ದ ಸುಮಾರು 4500 ಎಕರೆಯಷ್ಟು ಅಡಕೆ ತೋಟ ನಾಶವಾಗಿ ಹೋಗಿದೆ ಎಂದು ತೋಟಗಾರಿ ಇಲಾಖೆ ಅಧಿಕಾರಿ ರಾಮಕೃಷ್ಣ ಹೇಳಿದರು.

ಮಳೆಹಾನಿ ಪ್ರದೇಶಗಳಿಗೆ ಸಂಬಂಧಿತ ಇಲಾಖೆಗಳ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದರು. ಪರಿಹಾರ ಭರವಸೆ ನೀಡಿದರು.

ಶೀಘ್ರ ವಿದ್ಯುತ್ ಸಮಸ್ಯೆ ನಿವಾರಣೆ

ಭಾರೀ ಗಾಳಿಯಿಂದ ಸುಮಾರು 480ಕ್ಕೂ ಹೆಚ್ಚು ವಿದ್ಯುತ್ ಕಂಬಗಳು ಮತ್ತು 11ಕ್ಕೂ ಹೆಚ್ಚು ಟಿಸಿ ಕಂಬಗಳು ಮುರಿದು ಬಿದ್ದಿವೆ. ಸನ್ಯಾಸಿ ಕೋಡಮಗ್ಗಿ ಗ್ರಾಮವನ್ನು ಹೊರತು ಪಡಿಸಿ ಉಳಿದೆಲ್ಲಾ ಗ್ರಾಮಗಳಿಗೆ ವಿದ್ಯುತ್ ಸರಬರಾಜಯ ಆಗುತ್ತಿದೆ. ಕುಡಿಯುವ ನೀರು ಮತ್ತು ಮನೆ ಬಳಕೆಯ ವಿದ್ಯುತ್ ನೀಡಲಾಗಿದೆ. ಹೊಲಗದ್ದೆಯಲ್ಲಿ ಬೋರ್ವೆಲ್ ನಿಂದ ನೀರೆತ್ತಲು ಮತ್ತು ತೋಟ ಅಥವಾ ಜಮೀನುಗಳಲ್ಲಿರುವ ಒಂಟಿ ಮನೆಗಳಿಗೆ ಇನ್ನೆರಡು ದಿನಗಳಲ್ಲಿ ವಿದ್ಯುತ್ ಒದಗಿಸಲಾಗುವುದು ಎಂದು ಜೆಇಇ ಚಂದ್ರಪ್ಪ ಹೇಳಿದರು.

ಸುಮಾರು ನಾಲ್ಕು ದಶಕಗಳಿಂದ ಇಷ್ಟು ತೀವ್ರವಾದ ಗಾಳಿ ಮಳೆಯನ್ನು ಕಂಡಿಲ್ಲ. ನೂರಾರು ರೈತರು ಇಂದು ಸಂಕಷ್ಟದಲ್ಲಿದ್ದಾರೆ. ತಕ್ಷಣ ಎಲ್ಲರಿಗೂ ಸೂಕ್ತವಾದ ಪರಿಹಾರವನ್ನು ಒದಗಿಸುವುದು ಸರ್ಕಾರದ ಕೆಲಸ.

• **ರಾಜೇಶ್ ಪಟೇಲ್** ರೈತ, ಅರಹತೊಳಲು

ಪ್ರಕೃತಿ ಮುಂದೆ ಎಲ್ಲವೂ ಗೌಣ. ಆದರೆ ಸರ್ಕಾರಗಳು ರೈತರಿಗೆ ವೈಜ್ಞಾನಿಕವಾದ ಪರಿಹಾರ ನೀಡಬೇಕು. 50-60 ವರ್ಷಗಳ ಹಿಂದೆ ಮಾಡಿದ್ದಂತಹ ಪರಿಹಾರ ಸೂತ್ರವನ್ನು ಬದಲಾಯಿಸಿ ಕೊಂಡು ರೈತರ ಹಿತ ಕಾಯಬೇಕು.

• **ಎಂ.ಪಾಲಾಕ್ಷಪ್ಪ** ಯಡೇಹಳ್ಳಿ

ಶಿವಮೊಗ್ಗದ ನವೀಕೃತ ಬೃಹತ್ ಶೋರೂಂ ಲೋಕಾರ್ಪಣೆ

ಹೊಸ ವಿನ್ಯಾಸದಲ್ಲಿ ಉಡುಪಿಯ ದ ಒರಿಜಿನಲ್ ಆಭರಣ ಜ್ಯುವೆಲರ್ಸ್ ಮಳಿಗೆ | ನಟಿ ಅಂಕಿತಾ ಅಮರ್ ಉಪಸ್ಥಿತಿ

• **ಕನ್ನಡಪ್ರಭ ವಾರ್ತೆ** ಶಿವಮೊಗ್ಗ

ಪ್ರತಿಷ್ಠಿತ ಚಿನ್ನಾಭರಣ ಮಳಿಗೆ, ವಿಶ್ವಾಸ, ಕುಶಲತೆ ಮತ್ತು ಚಿರ ಸೌಂದರ್ಯಕ್ಕೆ ಹೆಸರುವಾಸಿಯಾದ ಉಡುಪಿಯ ದ ಒರಿಜಿನಲ್ ಆಭರಣ ಜ್ಯುವೆಲರ್ಸ್ ಸಂಸ್ಥೆಯ ಶಿವಮೊಗ್ಗದ ನವೀಕರಣಗೊಂಡ ಬೃಹತ್ ಮಳಿಗೆ ಶಿವಮೊಗ್ಗದ ಜೈಲ್ ಸರ್ಕಲ್ ಸಮೀಪದ ಕುವೆಂಪು ರಸ್ತೆಯಲ್ಲಿ ಬುಧವಾರ ಅದ್ದೂರಿಯಾಗಿ ಲೋಕಾರ್ಪಣೆಗೊಂಡಿತು.

ವಿನೂತನ ಶೋರೂಂನ ಉದ್ಘಾಟನೆ ಅತ್ಯಂತ ವಿಜೃಂಭಣೆಯಿಂದ ನೆರವೇರಿಸುವ ಮೂಲಕ ಒಂದು ಸ್ಮರಣೀಯ ಕ್ಷಣಕ್ಕೆ ಸಾಕ್ಷಿಯಾಯಿತು. ಈ ಸಂದರ್ಭ ಗ್ರಾಹಕರು, ಹಿತೈಷಿಗಳು ಮತ್ತು ಸ್ಥಳೀಯರು ಅಭೂತಪೂರ್ವ ಪ್ರತಿಕ್ರಿಯೆ ವ್ಯಕ್ತಪಡಿಸಿದರು.

ಉದ್ಘಾಟನಾ ಸಮಾರಂಭವು ಅಪಾರ ಅಭಿಮಾನಿಗಳ ಸಮಕ್ಷಮದಲ್ಲಿ ಗಣ್ಯ ಅತಿಥಿಗಳ ಅಮೃತಹಸ್ತದಿಂದ ದೀಪ ಪ್ರಜ್ವಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ನಟಿ ಅಂಕಿತಾ ಅಮರ್, ಶ್ರೇಷ್ಠ ಭಂಡಾರಿ, ವಂದನಾ ಶಾನ, ಗೀತಾ ಪೈ, ಗಜರದೇವಿ ಜಾದವ್, ಶೈಲಶ್ರೀ ಕಾಮತ್, ರಂಗಲಕ್ಷ್ಮೀ ಸುಬ್ರಮಣ್ಯಮ್ ಹಾಜರಿದ್ದರು. ಈ ವಿಶಿಷ್ಟ ಚಿನ್ನ ಮತ್ತು ವಜ್ರದ ಆಭರಣಗಳ ಸಂಗ್ರಹದ ಅನಾವರಣ ಸಮಾರಂಭವು ನೆರೆದ ಜನಸ್ತೋಮದ ಕಣ್ಣನ ಸೆಳೆಯಿತು.

ಚಿನ್ನದ ಆಭರಣಗಳ ವಿಭಾಗದ ಶುಭಾರಂಭ ಮತ್ತು ಜ್ಯುವೆಲರ್ಸ್ ಕಲೆಕ್ಷನ್‌ಯನ್ನು ಭಾಸ್ಕರ್‌ಜಿ. ಕಾಮತ್, ರೋಹಿಣಿ ಜಗದೀಶ್ ಪೈ ಹಾಗೂ ಮ್ರುದುಲ ರಂಜನ್ ಪೈ ಅನಾವರಣಗೊಳಿಸಿದರು. ಬೆಳ್ಳಿಯ ಆಭರಣಗಳ ವಿಭಾಗದ ಶುಭರಂಭ ಮತ್ತು ಜ್ಯುವೆಲರ್ಸ್‌ಯನ್ನು ಕಲೆಕ್ಷನ್‌ನ ಅಶ್ವತ್ ನಾರಾಯಣ್ ಅನಾವರಣಗೊಳಿಸಿದರು. ವಜ್ರದ ಆಭರಣಗಳ ವಿಭಾಗದ ಶುಭಾರಂಭ, ಜ್ಯುವೆಲರ್ಸ್ ಕಲೆಕ್ಷನ್‌ನ ನಟಿ ಅಂಕಿತ ಅಮರ್, ಶ್ರೇಷ್ಠ ಭಂಡಾರಿ ಅನಾವರಣಗೊಳಿಸಿದರು.

ದ ಒರಿಜಿನಲ್ ಆಭರಣ ಕುಟುಂಬದ ಪ್ರಮುಖ ಸದಸ್ಯರಾದ ಮಧುಕರ್‌ಎಸ್. ಕಾಮತ್, ಸುಭಾಸ್ ಎಂ. ಕಾಮತ್, ಮಹೇಶ್ ಎಂ. ಕಾಮತ್, ಸಂಧ್ಯಾ ಎಸ್. ಕಾಮತ್, ವೀಣಾ ಎಂ. ಕಾಮತ್, ಸಾತ್ವಿಕ್ ಕಾಮತ್, ಆಕರ್ಷ್ ಕಾಮತ್, ಶ್ಲೋಕಾ ಕಾಮತ್, ಅದಿತ್ರಿ ಕಾಮತ್ ಉತ್ಸಾಹದಿಂದ ನೆರವೇರಿಸಿಕೊಟ್ಟರು.

ದಿವಂಗತ ರಾಧಾ ಕಾಮತ್ ಅವರ ಆಶೀರ್ವಾದ ಇವರ ಪಾಲಿಗಿತ್ತು ಎಂಬುದು ಎದ್ದು ತೋರುತ್ತಿತ್ತು. ಶಾಸಕಿ ಶಾರದ ಪೂರ್ಯಾನಾಯ್ಕ್, ಮಾಜಿ ಶಾಸಕ ಆಶೋಕ್ ನಾಯ್ಕ್, ಮಹಾನಗರ ಪಾಲಿಕೆ ಮಾಜಿ ಸದಸ್ಯ ವಿಶ್ವಾಸ್, ಸಂಸದಬಿ.ವೈ. ರಾಘವೇಂದ್ರ, ರಮೇಶ್ ನಾಯಕ್ ಶುಭ ಹಾರೈಸಿದರು.

ಸಕಲ ಸವಲತ್ತುಗಳ ಐಷಾರಾಮಿ ಅನುಭವವನ್ನು ನೀಡಲು ಈ ಹೊಸ ವಿಶಾಲ ಶೋರೂಂ ಅನ್ನು ವಿನ್ಯಾಸಗೊಳಿಸಲಾಗಿದೆ. ಇದು ತನ್ನ ಬಂಗಾರ, ಬೆಳ್ಳಿ, ವಜ್ರ ಮತ್ತು ಮದುವೆಯ ಆಭರಣಗಳ ಆಯ್ದ ಪಾರಂಪರಿಕರ ಹಾಗೂ ಅತ್ಯಾಧುನಿಕ ಸಂಗ್ರಹಗಳ ಪ್ರದರ್ಶನದಿಂದ ಸಂದರ್ಶಕರನ್ನು ಮಂತ್ರಮುಗ್ಧಗೊಳಿಸಿತು. ಇದು ಆಭರಣದ ರಿಟೇಲ್ ವ್ಯಾಪಾರದ ಭವಿಷ್ಯಕ್ಕಾಗಿ ದ ಒರಿಜಿನಲ್ ಆಭರಣದ ದೂರದೃಷ್ಟಿಯನ್ನು ಪ್ರತಿಬಿಂಬಿಸುತ್ತಿತ್ತು.

ದ ಒರಿಜಿನಲ್ ಆಭರಣ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಸುಭಾಸ್ ಎಂ. ಕಾಮತ್ ಮಾತನಾಡಿ, ಇಂದು ನಮಗೆ ದೊರೆತ ಪ್ರೋತ್ಸ